ಕರ್ನಾಟಕ ವಿಧಾನ ಪರಿಷತ್

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	137
ಸದಸ್ಯರ ಹೆಸರು	:	ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ	:	21.09.2020
ಉತ್ತರಿಸುವ ಸಚಿವರು	:	ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ಕ್ರಸಂ	ಪ್ರಶ್ನೆ	ಉತ್ತರ
ಅ)	ರಾಜ್ಯದ ಸರ್ಕಾರಿ ಮತ್ತು ಅನುದಾನಿತ ಶಾಲೆಗಳ ಮಕ್ಕಳಿಗೆ ಬೆಳಗಿನ ಉಪಹಾರ ನೀಡುವ ಯೋಜನೆ ಸರ್ಕಾರದ ಮುಂದಿದೆಯೆ;	ರಾಜ್ಯದ 276 ಸರ್ಕಾರಿ ಕರ್ನಾಟಕ ಪಬ್ಲಿಕ್ ಶಾಲೆಗಳಲ್ಲಿನ ಪೂರ್ವ ಪ್ರಾಥಮಿಕ ತರಗತಿಗಳಲ್ಲಿ (ಎಲ್.ಕೆ.ಜಿ ಮತ್ತು ಯು.ಕೆ.ಜಿ) ವ್ಯಾಸಂಗ ಮಾಡುತ್ತಿರುವ ಮಕ್ಕಳಿಗೆ ಮಧ್ಯಾಹ್ನ ಉಪಹಾರ ಯೋಜನೆಯಡಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ವತಿಯಿಂದ ನೀಡಲಾಗುತ್ತಿರುವ ಆಹಾರ ಪ್ರಮಾಣ ಮತ್ತು ಘಟಕ ವೆಚ್ಚಕ್ಕನುಗುಣವಾಗಿ, ಬೆಳಗಿನ ಉಪಹಾರವನ್ನು 2019-20ನೇ ಸಾಲಿನಿಂದ ನೀಡಲು ಸರ್ಕಾರದ ಆದೇಶ ಸಂಖ್ಯೆ: ಇಡಿ 07 ಎಂಎಂಎಸ್ 2019 ದಿನಾಂಕ: 13/08/2019 ರನ್ವಯ ಅನುಮತಿ ನೀಡಲಾಗಿದೆ. ಉಳಿದಂತೆ ಯಾವುದೇ ಸರ್ಕಾರಿ ಮತ್ತು ಅನುದಾನಿತ ಶಾಲೆಗಳಿಗೆ ಮಧ್ಯಾಹ್ನ ಉಪಹಾರ ಯೋಜನೆಯಡಿ ಬೆಳಗಿನ ಉಪಹಾರ ನೀಡುವ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ.
ಆ)	ಇದ್ದಲ್ಲಿ, ರಾಜ್ಯದ ಎಷ್ಟು ಸರ್ಕಾರಿ ಮತ್ತು ಅನುದಾನಿತ ಶಾಲೆಗಳಿಗೆ ಈ ಸೌಲಭ್ಯವನ್ನು ಒದಗಿಸಲಾಗುತ್ತಿದೆ.	ರಾಜ್ಯದ 276 ಸರ್ಕಾರಿ ಕರ್ನಾಟಕ ಪಬ್ಲಿಕ್ ಶಾಲೆಗಳಲ್ಲಿನ ಪೂರ್ವ ಪ್ರಾಥಮಿಕ ತರಗತಿಗಳಲ್ಲಿ (ಎಲ್.ಕೆ.ಜಿ ಮತ್ತು ಯು.ಕೆ.ಜಿ) ವ್ಯಾಸಂಗ ಮಾಡುತ್ತಿರುವ ಮಕ್ಕಳಿಗೆ ಮಧ್ಯಾಹ್ನ ಉಪಹಾರ ಯೋಜನೆಯಡಿ ಬೆಳಗಿನ ಉಪಹಾರವನ್ನು ಒದಗಿಸಲಾಗಿದೆ.
ಇ)	ಈ ಸೌಲಭ್ಯವನ್ನು ಹಾಲಿ ಯಾವ ಯಾವ ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ.	ರಾಜ್ಯ ಎಲ್ಲಾ ಜಿಲ್ಲೆಗಳಲ್ಲಿರುವ 276 ಕರ್ನಾಟಕ ಪಬ್ಲಿಕ್ ಶಾಲೆಗಳಲ್ಲಿ ಸದರಿ ಸೌಲಭ್ಯವನ್ನು ಅನುಷ್ಠಾನಗೊಳಿಸಲಾಗಿದ್ದು, ಜಿಲ್ಲಾವಾರು ಶಾಲೆಗಳ ಸಂಖ್ಯೆಯ ಪಟ್ಟಿಯನ್ನು ಅನುಬಂಧಿಸಿದೆ. (ಅನುಬಂಧ-1)
ಈ)	ಸದರಿ ಯೋಜನೆಯನ್ನು ಖಾಸಗಿ ಶಾಲೆಗಳಿಗೂ ವಿಸ್ತರಿಸುವ ಉದ್ದೇಶ ಸರ್ಕಾರದಲ್ಲಿದೆಯೇ?	ಸದರಿ ಯೋಜನೆಯನ್ನು ಖಾಸಗಿ ಶಾಲೆಗಳಿಗೆ ವಿಸ್ತರಿಸುವ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ.

ಇಪಿ 41 ಎಂಎಂಎಸ್ 2020

S. S.

(ಎಸ್. ಸುರೇಶ್ ಕುಮಾರ್)

ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು

ಅನುಬಂಧ-1

ಜಿಲ್ಲಾವಾರು ಕರ್ನಾಟಕ ಪಬ್ಲಿಕ್ ಶಾಲೆಗಳ ಸಂಖ್ಯೆ

ಕ್ರಮ ಸಂಖ್ಯೆ	ಜಿಲ್ಲೆಯ ಹೆಸರು	ಕರ್ನಾಟಕ ಪಬ್ಲಿಕ್ ಶಾಲೆಗಳ ಸಂಖ್ಯೆ
1	ಬೆಂಗಳೂರು ಉತ್ತರ	11
2	ಬೆಂಗಳೂರು ದಕ್ಷಿಣ	17
3	ಚಿತ್ರದುರ್ಗ	7
4	ದಾವಣಗೆರೆ	11
5	ಶಿವಮೊಗ್ಗ	10
6	ಬೆಂಗಳೂರು ಗ್ರಾಮಾಂತರ	4
7	ರಾಮನಗರ	6
8	ಕೋಲಾರ	7
9	ಚಿಕ್ಕಬಳ್ಳಾಪುರ	6
10	ತುಮಕೂರು	11
11	ಮಧುಗಿರಿ	7
12	ಮೈಸೂರು	12
13	ಮಂಡ್ಯ	9
14	ಚಾಮರಾಜನಗರ	4
15	ಕೊಡಗು	3
16	ಹಾಸನ	10
17	ಚಿಕ್ಕಮಗಳೂರು	8
18	ದಕ್ಷಿಣ ಕನ್ನಡ	9
19	ಉಡುಪಿ	8
20	ಧಾರವಾಡ	8
21	ಉತ್ತರ ಕನ್ನಡ	8
22	ಉತ್ತರ ಕನ್ನಡ ಶಿರಸಿ	5
23	ಹಾವೇರಿ	7
24	ಗದಗ	7
25	ಬೆಳಗಾವಿ	8
26	ಚಿಕ್ಕೋಡಿ	10
27	ಬಾಗಲಕೋಟೆ	8
28	ವಿಜಯಪುರ	10
29	ಬೀದರ್	6
30	ಬಳ್ಳಾರಿ	9
31	ಕಲಬುರಗಿ	10
32	ಕೊಪ್ಪಳ	8
33	ರಾಯಚೂರು	9
34	ಯಾದಗಿರಿ	3
ಒಟ್ಟು		276